ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಆರನೇ ಅಧಿವೇಶನ
(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 25ನೇ ಮಾರ್ಚ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೇಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೇಳನೇ ಪಟ್ಟಿ

2.ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಲಕ್ಷ್ಮಣ ಎಸ್. ಸವದಿ ಅವರು ಚಿಕ್ಕೋಡಿ ಜಿಲ್ಲೆಯ ಅನೇಕ ಶಾಲೆಗಳಲ್ಲಿ ಉಪನ್ಯಾಸಕರಿಲ್ಲದೆ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀಮತಿ ಶಾರದಾ ಪೂರ್ಯಾ ನಾಯ್ಕ್ ಅವರು ಶಿವಮೊಗ್ಗ ತಾಲ್ಲೂಕು, ಕಸಬಾ ಹೋಬಳಿ ಸಿದ್ಲಿಪುರ ಮತ್ತು ದೇವಕಾತಿ ಕೊಪ್ಪ ಗ್ರಾಮಗಳ ಬಗರ್ ಹುಕುಂ ಸಾಗುವಳಿದಾರರ ಜಮೀನನ್ನು ಕೆಐಎಡಿಬಿ ವತಿಯಿಂದ ಭೂಸ್ವಾಧೀನ ಪಡಿಸಿಕೊಂಡಿದ್ದು ಸದರಿ ಸಾಗುವಳಿದಾರರಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಸಿ.ಎನ್. ಬಾಲಕೃಷ್ಣ ಮತ್ತು ಕೆ.ಎಂ.ಶಿವಲಿಂಗೇಗೌಡ ಅವರುಗಳು 2015-16ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಅನುಮೋದನೆಯಾಗಿರುವ ಹಾಸನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಮೂಲಭೂತ ಸೌಕರ್ಯ ಹಾಗೂ ಬೋಧಕ/ಬೋಧಕೇತರ ಸಿಬ್ಬಂದಿ ಗಳನ್ನು ಒದಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

4. ಶ್ರೀ ಸಿ.ಟಿ.ರವಿ ಅವರು ಚಿಕ್ಕಮಗಳೂರು ಕಡೂರು ತಾಲ್ಲೂಕು ಸಖರಾಯಪಟ್ಟಣ ಹೋಬಳಿಯ ಐಯ್ಯನಕೆರೆಯಲ್ಲಿ ಕೋಡಿಬಿದ್ದು ಹೋಗುವ ನೀರನ್ನು ಲಿಫ್ಟ್ ಮಾಡಿ ಹುಲಿಕೆರೆಯ ಬೆರಟಿಗೆರೆ ದೊಡ್ಡಕೆರೆಗೆ ಹಾಗೂ ಬಸವನಹಳ್ಳಿ ಕೆರೆಯಿಂದ ಲಕ್ಯಾ ಹೋಬಳಿ ದಾಸರಹಳ್ಳಿ ಕೆರೆಗೆ ಮತ್ತು ಮಾದರಸನ ಕೆರೆಗೆ ನೀರು ತುಂಬಿಸುವ ಯೋಜನೆಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಎಸ್.ಟಿ.ಸೋಮಶೇಖರ್ ಅವರು ಕೆ.ಎಸ್.ಬಿ.ಸಿ.ಎಲ್ ಡಿಪೋಗಳಲ್ಲಿ ಲೋಡಿಂಗ್ ಮತ್ತು ಅನ್‌ಲೋಡಿಂಗ್ ಮಾಡುವ ಅಸಂಘಟಿತ ಕಾರ್ಮಿಕರಾದ ಹಮಾಲಿಗಳಿಗೆ ಗುರುತಿನ ಚೀಟಿ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಸ್.ಆರ್.ವಿಶ್ವನಾಥ್ ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕೇತರ ಸಿಬ್ಬಂದಿಗಳ ನೇಮಕಾತಿಯಲ್ಲಿ ತಾರತಮ್ಯ ನೀತಿಯನ್ನು ಅನುಸರಿಸುತ್ತಿರುವುದರಿಂದ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

7. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಬಾಗೂರು, ನುಗ್ಗೇಹಳ್ಳಿ, ಹಿರಿಸಾವೆ ಹಾಗೂ ಶ್ರವಣಬೆಳಗೊಳ ಹೋಬಳಿಗಳಲ್ಲಿನ ಸುಮಾರು 150ಕ್ಕೂ ಹೆಚ್ಚು ಹಳ್ಳಿಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಬಾವಸವಳ್ಳಿಯಲ್ಲಿ ಹಲ್ಲೆಯಿಂದ ಮರಣ ಹೊಂದಿದ್ದ ವ್ಯಕ್ತಿಯ ಮರಣೋತ್ತರ ಪರೀಕ್ಷೆಯಲ್ಲಿ ಕ್ಯಾನ್ಸರ್ ಖಾಯಿಲೆಯಿಂದ ನಿಧನ ಹೊಂದಿರುವುದಾಗಿ ವರದಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9. ಡಾ॥ ವಿಶ್ವನಾಥ್ ಈ ಪಾಟೀಲ್ ಅವರು ರಾಜ್ಯ ಸರ್ಕಾರಿ ನೌಕರರಿಗೆ ಇರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ನಿವೃತ್ತ ಸರ್ಕಾರಿ ನೌಕರರಿಗೂ ವಿಸ್ತರಿಸುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಆರ್.ಅಲಗೂರು(ರಾಜು) ಅವರು ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ನಾಗಠಾಣ ಮತಕ್ಷೇತ್ರದ ಚಡಚಣ ಹೋಬಳಿ ಕೇಂದ್ರವನ್ನು ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

11. ಶ್ರೀ ಯು.ಬಿ.ಬಣಕಾರ ಅವರು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯವರು ಈ ಹಿಂದೆ ಪೂರೈಕೆ ಮಾಡುತ್ತಿದ್ದಂತೆ ಆರು ಗಂಟೆ ಮೂರು ಫೇಸ್ ವಿದ್ಯುತ್ ಪೂರೈಸಲು ಆದೇಶಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

12. ಶ್ರೀ ಜಿ.ಎಸ್. ಪಾಟೀಲ್ ಅವರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಆಸ್ತಿ ದಾಖಲಾತಿಗಾಗಿ ಮತ್ತು ಉತಾರ ನೀಡಲು ಜಾರಿಗೆ ತಂದಿರುವ ಇ-ಸ್ವತ್ತು ತಂತ್ರಾಂಶವು ನಿಧಾನಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀ ಗೋವಿಂದ ಎಂ. ಕಾರಜೋಳ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಲ್ಯಾಣಕ್ಕಾಗಿ 2015-16ನೇ ಸಾಲಿನ ಆಯವ್ಯಯದಲ್ಲಿ ವಿವಿಧ ಯೋಜನೆಗಳಿಗೆ ಮೀಸಲಟ್ಟ ಹಣವನ್ನು ಸದ್ಬಳಕೆ ಮಾಡುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

14. ಶ್ರೀಮತಿ ವೈ. ರಾಮಕ್ಕ ಅವರು ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಿಗೆ ನಿಯಮಾನುಸಾರ ಶಾಸಕರ ಕಛೇರಿಯ ವ್ಯವಸ್ಥೆ ಕಲ್ಪಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಸಂಜಯ ಬಿ. ಪಾಟೀಲ್ ಅವರು ಬೆಳಗಾವಿ ಗ್ರಾಮೀಣ ಮತ ಕ್ಷೇತ್ರದ ವ್ಯಾಪ್ತಿಗೆ 2013-14ನೇ ಸಾಲಿನಲ್ಲಿ ಬಿಡುಗಡೆಗೊಳಿಸಿದ್ದ ಅನುದಾನವನ್ನು ಬೇರೆ ವಿಧಾನಸಭಾ ಮತಕ್ಷೇತ್ರಕ್ಕೆ ಬಳಸಿಕೊಂಡಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಎಂ.ಟಿ.ಕೃಷ್ಣಪ್ಪ ಅವರು ತುರುವೇಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸಿ.ಎಸ್.ಪುರ ಹೋಬಳಿಯಲ್ಲಿ ಅಕ್ರಮ ಮರಳು ಧಂಧೆ ಹಾಗೂ ಕ್ಲಬ್ ನಡೆಸುವವರ ಜೊತೆ ಕಾನೂನು ವಿರೋಧಿ ಚಟುವಟಿಕೆಗಳಲ್ಲಿ ಶಾಮೀಲಾಗಿರುವ ಪೋಲೀಸ್ ಸಿಬ್ಬಂದಿಯವರ ಮೇಲೆ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

17. ಶ್ರೀ ಕೆ.ಆರ್.ರಮೇಶ್ ಕುಮಾರ್ ಅವರು ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಮತ್ತಿತರ ಜನೋಪಯೋಗಿ ಕೆಲಸ ಕಾರ್ಯಗಳಿಗೆ ಸರ್ಕಾರಿ ಭೂಮಿಗಳನ್ನು ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸದೇ ಕರ್ತವ್ಯ ಲೋಪ ಮಾಡಿರುವ ಅಧಿಕಾರಿಗಳ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಎಸ್.ಭೀಮಾ ನಾಯ್ಕ್ ಅವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲವಿ ಜಲಾಶಯಕ್ಕೆ ತುಂಗಭದ್ರ ನದಿಯಿಂದ ಕುಡಿಯುವ ನೀರನ್ನು ಒದಗಿಸುವ ಯೋಜನೆಯನ್ನು ಡಿ.ಪಿ.ಆರ್. ಮಾಡಿ ಆಡಳಿತಾತ್ಮಕ ಅನುಮೋದನೆ ಪಡೆದು ಕಾಮಗಾರಿಯನ್ನು ಪ್ರಾರಂಭಿಸುವುದರ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಗೋವಿಂದ ಎಂ.ಕಾರಜೋಳ,ಕೆ.ಜಿ.ಬೋಪಯ್ಯ, ಸಿ.ಟಿ. ರವಿ ಮತ್ತು ವಿ.ಸುನಿಲ್ ಕುಮಾರ್ ಅವರುಗಳು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಮತ್ತು 1960ಕ್ಕೆ 2014ರಲ್ಲಿ ತಂದಿರುವ ಅನೇಕ ತಿದ್ದುಪಡಿಗಳು ಸಂವಿಧಾನದ ಅಗತ್ಯತೆ ಮತ್ತು ಕಾಯ್ದೆಯ ಪೀಠಿಕೆಯಲ್ಲಿ ಅಳವಡಿಸಿರುವ ತತ್ವಗಳಿಗೆ ವಿರುದ್ಧವಾಗಿರುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಟಿ.ವೆಂಕಟರಮಣಯ್ಯ, ಡಾ॥ ಕೆ.ಶ್ರೀನಿವಾಸ ಮೂರ್ತಿ ಮತ್ತು ಪಿ.ಆರ್. ಸುಧಾಕರ್ ಲಾಲ್ ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಶೇಖರಣೆಯಾಗುವ ಘನತ್ಯಾಜ್ಯ ಕಸವನ್ನು ದೊಡ್ಡಬಳ್ಳಾಪುರ ತಾಲ್ಲೂಕಿನ ಸಕ್ಕರೆ ಗೊಲ್ಲಹಳ್ಳಿ ಗ್ರಾಮ ಪಂಚಾಯತಿಯ ಗುಂಡ್ಲುಹಳ್ಳಿ ಗ್ರಾಮದಲ್ಲಿ ಟೆರ್ರಾಫಾರ್ಮ್ ಕಸ ಸಂಸ್ಕರಣ ಘಟಕವು ವೈಜ್ಞಾನಿಕವಾಗಿ ಕಸವನ್ನು ಸಂಸ್ಕರಣೆ ಮಾಡದೆ ಪರಿಸರ ಮಾಲಿನ್ಯ ಉಂಟಾಗುತ್ತಿರುವುದರಿಂದ ಟೆರ್ರಾ ಫಾರ್ಮ್ ಮತ್ತು ಎಂ.ಎಸ್.ಜಿ.ಪಿ. ಘಟಕದ ಕಾರ್ಯ ಸ್ಥಗಿತಗೊಳಿಸುವ ಬಗ್ಗೆ ಚರ್ಚೆ.

3. ಶ್ರೀ ಕೆ.ಎಸ್.ಪುಟ್ಟಣ್ಣಯ್ಯ ಅವರು ಸರ್ಕಾರವು ಉತ್ತರ ಕರ್ನಾಟಕದ ಕಬ್ಬಿಗೆ ಎಕ್ಸ್ ಫೀಲ್ಡ್, ದಕ್ಷಿಣ ಕರ್ನಾಟಕದ ಕಬ್ಬಿಗೆ ಎಕ್ಸ್ ಗೇಟ್ ಬೆಲೆ 2500ರೂ ಗಳನ್ನು ನಿಗದಿ ಮಾಡಿದ್ದರೂ ಇತ್ತೀಚಿನ ದಿನಗಳಲ್ಲಿ ಸಕ್ಕರೆ ಬೆಲೆಯು ಕುಸಿದಿದ್ದು, ಸಕ್ಕರೆ ಉತ್ಪಾದನೆ ಬೆಲೆಗಿಂತ ಕಡಿಮೆ ಬೆಲೆಗೆ ಸಕ್ಕರೆ ಮಾರಾಟವಾಗುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)